# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 128
ಮಾನ್ಯ ಸದಸ್ಯರ ಹೆಸರು : ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 10.07.2018
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಯವರು.

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ಕಾರವಾರ ಜಿಲ್ಲೆಯ ಕೆಲವೊಂದು ತಾಲ್ಲೂಕುಗಳಲ್ಲಿ ಮಟಕಾ, ಇಸ್ಪೀಟ್, ಜೂಜಾಟ, ಅಕ್ರಮ ಸಾರಾಯಿ ಮಾಡುವ ಜಾಲವು ಅನೇಕ ವರ್ಷಗಳಿಂದ ಅಸ್ತಿತ್ವದಲ್ಲಿದ್ದು, ಈಗ ಅದು ಮಿತಿಮೀರಿ ಬೆಳೆದು ಕೆಲವೊಂದು ಕುಟುಂಬಗಳು ಬೀದಿಪಾಲಾಗಿದ್ದು, ಇದನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ನಿಷ್ಕ್ರೀಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು) | ಉತ್ತರ ಕನ್ನಡ ಜಿಲ್ಲೆಯಲ್ಲಿ ಮಟಕಾ, ಇಸ್ಪೀಟ್, ಜೂಜಾಟ, ಅಕ್ರಮ ಸಾರಾಯಿಯಂತಹ ಅಕ್ರಮ ಚಟುವಟಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಗುಪ್ತವಾಗಿ ಮಾಹಿತಿಯನ್ನು ಸಂಗ್ರಹಿಸಿ ದಾಳಿ ನಡೆಸಿ, ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಉತ್ತರ ಕನ್ನಡ ಜಿಲ್ಲೆಯಲ್ಲಿ ಅಧಿಕಾರಿಗಳು ಹಪ್ತಾ ವಸೂಲಿ ಮಾಡಿ ಈ ಅಕ್ರಮ ಧಂದೆಗೆ ಪ್ರೋತ್ಸಾಹ ನೀಡುತ್ತಿರುವ ಪ್ರಕರಣಗಳು ಬೆಳಕಿಗೆ ಬಂದಿರುವುದಿಲ್ಲ.<br><br>ಅಲ್ಲದೆ ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ, ಹಳಿಯಾಳ, ರಾಮನಗರ ಮುಂತಾದ ಕಡೆಗಳಲ್ಲಿ ಮಟಕಾ, ಇಸ್ಪೀಟ್ ಜೂಜಾಟ, ಅಕ್ರಮ ಸಾರಾಯಿಯಂತಹ ಅಕ್ರಮ ಚುವಟಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಗುಪ್ತವಾಗಿ ಮಾಹಿತಿಯನ್ನು ಸಂಗ್ರಹಿಸಿ ದಾಳಿ ನಡೆಸಲಾಗುತ್ತಿದೆ.<br><br>ದಾಂಡೇಲಿ ನಗರ ಠಾಣೆಯಲ್ಲಿ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸಲು ವಿಫಲರಾದ ಸಿಹೆಚ್‌ಸಿ-1440 ಸೋಮಶೇಖರ ಮಹಾದೇವ ಮೇತ್ರಿ ರವರಿಗೆ ದಾಂಡೇಲಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ನಿರ್ಲಕ್ಷತನ ಹಾಗೂ ಬೇಜವಾಬ್ದಾರಿತನ ತೋರಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಸದರಿಯವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಲಾಗಿತ್ತು. ತದನಂತರ ಸದರಿಯವರನ್ನು ಅಮಾನತ್ತಿನಿಂದ ಬಿಡುಗಡೆಗೊಳಿಸಿ ದಾಂಡೇಲಿ ನಗರ ಪೊಲೀಸ್ ಠಾಣೆಯಿಂದ ಮಲ್ಲಾಪುರ ಪೊಲೀಸ್ ಠಾಣೆಗೆ ವರ್ಗಾಯಿಸಿ ಆದೇಶಿಸಲಾಗಿದೆ. ಸದರಿಯವರ ವಿರುದ್ಧ ಕೆ.ಎಸ್.ಪಿ (ಡಿಪಿ) ನಿಯಮಾವಳಿ 1965/89ರ ನಿಯಮ-7ರನ್ವಯ ದಿನಾಂಕ: 19.05.2018 ರಂದು ದೋಷಾರೋಪಣಾ ಪತ್ರ ಹೊರಡಿಸಿದ್ದು, ಸೂಕ್ತ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಧಂದೆಯನ್ನು ತಡೆಯುವಲ್ಲಿ ವಿಫಲರಾಗುವ ಅಧಿಕಾರಿಗಳ ವಿರುದ್ಧ ಇಲಾಖಾ ಶಿಸ್ತು ಕ್ರಮದೊಂದಿಗೆ ಅವಶ್ಯಕತೆಗನುಗುಣವಾಗಿ ಬೇರೆ ಸ್ಥಳಕ್ಕೆ ವರ್ಗಾವಣೆ ಮಾಡುವ ಉದ್ದೇಶ ಹೊಂದಿದೆ. |
| ಆ | ಕೆಲವೊಂದು ತಾಲ್ಲೂಕುಗಳಲ್ಲಿ ಸಂಬಂಧಿಸಿದ ಇಲಾಖೆಯಿಂದ ಹಪ್ತಾ ವಸೂಲಿ ಮಾಡಿ ಈ ಅಕ್ರಮ ಧಂದೆಗೆ ಪ್ರೋತ್ಸಾಹ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; ದಾಂಡೇಲಿ, ಹಳಿಯಾಳ, ರಾಮನಗರ, ಮುಂತಾದ ಕಡೆಗಳಲ್ಲಿ ಈ ಅವ್ಯವಹಾರವನ್ನು ತಡೆಗಟ್ಟಲು ಪೊಲೀಸ್ ಇಲಾಖೆ ನಿಷ್ಕಾಳಜಿ ಮಾಡಿದ್ದು, ಅನೇಕ ಬಡ ಕುಟುಂಬಗಳು ಬೀದಿಪಾಲಾಗಿರುವುದು ನಿಜವೇ; ಸದರಿ ಅವ್ಯವಹಾರ ತಡೆಗಟ್ಟಲು ನಿಷ್ಪ್ರಯೋಜಕವಾದ ಅಧಿಕಾರಿಗಳ ಮೇಲೆ ಸೂಕ್ತ ತನಿಖೆ ಹಾಕಲಾಗುವುದೇ? (ವಿವರ ನೀಡುವುದು) | |
| ಇ | ಹಾಗೂ ಅವರನ್ನು ಬೇರೆ ಕಡೆ ವರ್ಗಾವಣೆ ಮಾಡಿ ಆಗುತ್ತಿರುವ ಅಕ್ರಮ ವ್ಯವಹಾರಕ್ಕೆ ಕಡಿವಾಳ ಹಾಕಲಾಗುವುದೇ? ವಿವರ ನೀಡುವುದು. | |

ಹೆಚ್‌ಡಿ 383 ಎಸ್‌ಎಸ್‌ಟಿ 2018

(ಡಾ|| ಜಿ.ಪರಮೇಶ್ವರ್)
ಉಪ ಮುಖ್ಯಮಂತ್ರಿಯವರು